**NOVEMBER 21, 2024**

**AKASHAVANI - DHARWAD**

**PRADESH SAMACHARA (KANNADA) 07.05 A.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವರು: ಹರ್ಷವರ್ಧನ ಶೀಲವಂತ**

<><><>

**ಮುಖ್ಯಾಂಶಗಳು:**

<><><>

- **ಹಿರಿಯ ಸಾಹಿತಿ, ಗೊ.ರು.ಚನ್ನಬಸಪ್ಪ, ಮಂಡ್ಯದ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ, ಸರ್ವಾಧ್ಯಕ್ಷರಾಗಿ ಆಯ್ಕೆ.**
- **ಕೈಗಾರಿಕಾ ಕ್ಷೇತ್ರದ ಬಂಡವಾಳ ಹೂಡಿಕೆಯಲ್ಲಿ ರಾಜ್ಯ, ದೇಶಕ್ಕೆ ಮೂರನೇ ಸ್ಥಾನದಲ್ಲಿದೆ – ಮುಖ್ಯಮಂತ್ರಿ ಸಿದ್ದರಾಮಯ್ಯ.**
- **ದೇಶದ ಆರ್ಥಿಕ ವ್ಯವಸ್ಥೆಯನ್ನು ಸುದೃಢಗೊಳಿಸಲು, ಸಹಕಾರಿ ರಂಗ ಸಮರ್ಥವಾಗಿದೆ – ಸತೀಶ ಜಾರಕಿಹೊಳಿ.**
- **ಇಂದು, ವಿಶ್ವ ಮೀನುಗಾರಿಕೆ ದಿನಾಚರಣೆ; ಸಣ್ಣ ಪ್ರಮಾಣದ ಮೀನುಗಾರರ ನಿರ್ಣಾಯಕ ಪಾತ್ರದತ್ತ, ಗಮನ ಸೆಳೆಯುವ, ದಿನ.**

<><><>

**ಈಗ ವಾರ್ತೆಗಳ ವಿವರ**

<><><>

**ಮಂಡ್ಯದಲ್ಲಿ ಆಯೋಜಿತ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ, ಹಿರಿಯ ಸಾಹಿತಿ, ಗೊ.ರು.ಚನ್ನಬಸಪ್ಪ ಅವರು, ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಗೊಂಡೇದಹಳ್ಳಿಯ ರುದ್ರಪ್ಪಗೌಡರು ಚನ್ನಬಸಪ್ಪ ಅವರು, 1992 ರಿಂದ 1995ರ ವರೆಗೆ, ಕೇಂದ್ರ ಕನ್ನಡ ಸಾಹಿತ್ಯ ಪರಿ ‘ತ್ತಿನ ಅಧ್ಯಕ್ಷರಾಗಿ, ಸೇವೆ ಸಲ್ಲಿಸಿರುವುದು ವಿಶೇಷ. ಸಾಹಿತಿ, ಜಾನಪದ ವಿದ್ವಾಂಸ ಗೊ.ರು. ಚನ್ನಬಸಪ್ಪ ಅವರು, ಮೇ 18, 1930 ರಲ್ಲಿ, ಚಿಕ್ಕಮಗಳೂರು ಜಿಲ್ಲೆ ತರೀಕೆರೆ ತಾಲೂಕಿನ ಗೊಂಡೇದಹಳ್ಳಿಯಲ್ಲಿ, ರುದ್ರಪ್ಪಗೌಡರು ಹಾಗೂ ಅಕ್ಕಮ್ಮ ದಂಪತಿಯ ಸುಪುತ್ರರಾಗಿ ಜನಿಸಿದರು. ಕರ್ನಾಟಕ ನಾಟಕ ಅಕಾದೆಮಿ ಪ್ರಶಸ್ತಿ, ರಾಜ್ಯೋತ್ಸವ ಪ್ರಶಸ್ತಿಗಳು ಸಂದಿವೆ. ಪ್ರದೇಶ ಸಮಾಚಾರಕ್ಕಾಗಿ, ಗೊ.ರು.ಚ. ತಮ್ಮ ಅನಿಸಿಕೆ ವ್ಯಕ್ತಪಡಿಸಿದ್ದಾರೆ.**

<><><>

**ಗೊ.ರು.ಚ. ಧ್ವನಿ 50 ಸೆಕೆಂದುಗಳು**

<><><>

ಈ ಮಧ್ಯೆ, ಕನ್ನಡ ಜ್ಯೋತಿ ರಥಯಾತ್ರೆ, ಚಿಕ್ಕಬಳ್ಳಾಪುರ ತಲುಪಿದೆ. ಜಿಲ್ಲಾಡಳಿತ ಸಂಭ್ರಮದಿಂದ ಜ್ಯೋತಿ ರಥವನ್ನು ಸ್ವಾಗತಿಸಿತು.

<><><>

ಕೈಗಾರಿಕಾ ಕ್ಷೇತ್ರದ ಬಂಡವಾಳ ಹೂಡಿಕೆಯಲ್ಲಿ ರಾಜ್ಯ, ದೇಶಕ್ಕೆ ಮೂರನೇ ಸ್ಥಾನದಲ್ಲಿದೆ. ಮುಂಬರುವ ಆರು ತಿಂಗಳಲ್ಲಿ, 73 ಸಾವಿರ ಕೋಟಿ ರೂಪಾಯಿಗೂ ಹೆಚ್ಚಿನ ಹೂಡಿಕೆಗೆ ಸಾಕ್ಷಿಯಾಗಲಿದೆ ಎಂದು, ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನ ಕೃಷಿ ವಿಶ್ವವಿದ್ಯಾಲಯದಲ್ಲಿ ಆಯೋಜಿಸಿದ್ದ, ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮೆಟಲ್ಸ್ ಸಂಸ್ಥೆಯ, 78ನೇ ವಾರ್ಷಿಕ ತಾಂತ್ರಿಕ ಸಮಾವೇಶವನ್ನು, ಉದ್ಘಾಟಿಸಿ ಮಾತನಾಡಿದರು. ರಾಜ್ಯ ಸರ್ಕಾರ ಈ ವರ್ಷ, 21 ವಿವಿಧ ಉದ್ಯಮಗಳೊಂದಿಗೆ ಒಡಂಬಡಿಕೆ ಮಾಡಿಕೊಂಡಿದೆ. ರಾಜ್ಯ ಮಟ್ಟದಲ್ಲಿ ಏಕ ಗವಾಕ್ಷಿ ಸಮಿತಿಗಳ ಮೂಲಕ, 90 ಸಾವಿರ ಕೋಟಿ ರೂಪಾಯಿಗೂ ಹೆಚ್ಚಿನ ಹೂಡಿಕೆಯಾಗಲಿರುವ, ಒಟ್ಟು 669 ಕೈಗಾರಿಕಾ ಯೋಜನೆಗಳಿಗೆ ಅನುಮತಿ ನೀಡಲಾಗಿದೆ. 1 ಲಕ್ಷದ 73 ಸಾವಿರ  ಜನರಿಗೆ, ಉದ್ಯೋಗ ದೊರೆಯಲಿದೆ ಎಂದರು.

<><><>

ದೇಶದ ಆರ್ಥಿಕ ವ್ಯವಸ್ಥೆಯನ್ನು ಸುದೃಢಗೊಳಿಸಲು ಮತ್ತು ರೈತರ ಹಿತಕಾಯಲು, ಸಹಕಾರಿ ರಂಗ ಸಮರ್ಥವಾಗಿದೆ ಎಂದು, ಲೋಕೋಪಯೋಗಿ ಖಾತೆ ಸಚಿವ ಸತೀಶ ಜಾರಕಿಹೊಳಿ ಹೇಳಿದ್ದಾರೆ. ಬೆಳಗಾವಿಯಲ್ಲಿ, ಅಖಿಲ ಭಾರತ ಸಹಕಾರ ಸಪ್ತಾಹಕ್ಕೆ ಚಾಲನೆ ನೀಡಿ ಅವರು, ಮಾತನಾಡಿದರು. ಬೆಳಗಾವಿ ಜಿಲ್ಲೆ ಹುಕ್ಕೇರಿಯಲ್ಲಿ, ಸಹಕಾರಿ ವಿದ್ಯುತ್ ಶಕ್ತಿ ಕೇಂದ್ರ ನಿರ್ಮಾಣವಾಗಿದೆ. ಚಂದರಗಿಯಲ್ಲಿ ದೇಶಕ್ಕೆ ಮಾದರಿಯಾದ ಕ್ರೀಡಾ ಶಾಲೆ ಇದೆ. ಘಟಪ್ರಭಾದಲ್ಲಿ ಅತ್ಯುತ್ತಮವಾದ ಆಸ್ಪತ್ರೆ, ಆಯುರ್ವೇದ  ಮಹಾವಿದ್ಯಾಲಯ, ಸಹಕಾರಿ ರಂಗದ ಮಾದರಿಗಳಾಗಿ, ತಲೆ ಎತ್ತಿ ನಿಂತಿವೆ ಎಂದರು.

<><><>

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವರಾದ, ಲಕ್ಷ್ಮೀ ಹೆಬ್ಬಾಳಕರ ಮಾತನಾಡಿ, ದೇಶದ ಮೊಟ್ಟ ಮೊದಲು, ಸಹಕಾರಿ ಸಂಘ, 1904 ರಲ್ಲಿ ಗದಗ ಜಿಲ್ಲೆಯ ಕಣಗಿನಹಾಳ ಗ್ರಾಮದಲ್ಲಿ, ಕೃಷಿ ಪತ್ತಿನ ಸಹಕಾರಿ ಸಂಘವಾಗಿ, ಜನ್ಮ ತಾಳಿತು ಎಂದರು.

<><><>

ರಾಜ್ಯದ ಸರ್ಕಾರಿ ವಿಜ್ಞಾನ ಪದವಿ ಪೂರ್ವ ಕಾಲೇಜುಗಳಲ್ಲಿ, "Online Live NEET/JEE/CET" ತರಗತಿಗಳ  ತರಬೇತಿ ಯೋಜನೆಯನ್ನು ಜಾರಿಗೊಳಿಸಲಾಗಿದೆ ಎಂದು, ಶಾಲಾ ಶಿಕ್ಷಣ ಖಾತೆ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.ಬೆಂಗಳೂರಿನ ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿದ ಸಚಿವರು, 25 ಸಾವಿರ ವಿದ್ಯಾರ್ಥಿಗಳು ತರಬೇತಿ ಪಡೆಯಲಿದ್ದಾರೆ. ಆಯ್ಕೆಯಾದ ವಿದ್ಯಾರ್ಥಿಗಳಿಗೆ ಪ್ರತ್ಯೇಕ ಲಾಗಿನ್ ಐಡಿ ನೀಡಲಾಗಿದೆ. ಆಸಕ್ತ ಎಲ್ಲ ವಿದ್ಯಾರ್ಥಿಗಳೂ ಸಹ ಆನ್‌ಲೈನ್‌ನಲ್ಲಿ ಉಚಿತ ತರಬೇತಿ ಪಡೆಯಬಹುದು ಎಂದರು. ಆರ್ಥಿಕ ಸಮಸ್ಯೆ ಹಾಗೂ ಗ್ರಾಮೀಣ ವಿದ್ಯಾರ್ಥಿಗಳಿಗೆ ಸರಿಯಾದ ಸಾರಿಗೆ ಸೌಲಭ್ಯ ಸಿಗದೆ, ವಿದ್ಯಾರ್ಥಿಗಳು ವೈದ್ಯಕೀಯ, ಇಂಜಿನಿಯರಿಂಗ್ ಹಾಗೂ ಉನ್ನತ ಮಟ್ಟದ ಶಿಕ್ಷಣ ಪಡೆಯುವ ಕನಸು ಈಡೇರುವುದಿಲ್ಲ ಎಂಬುದನ್ನು ಅರಿತ ಮುಖ್ಯಮಂತ್ರಿಯವರು, ಈ ಯೋಜನೆಗೆ ಚಾಲನೆ ನೀಡಿದ್ದಾರೆ ಎಂದು, ಸಚಿವರು ತಿಳಿಸಿದರು.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಲಿಂಗತ್ವ ಅಲ್ಪಸಂಖ್ಯಾತರ ಸಂಘಟನೆ ಮತ್ತು ವಿಮೋಚನೆಗಾಗಿ, 'ಲಿಂಗತ್ವ ಮತ್ತು ಲೈಂಗಿಕ ಅಲ್ಪಸಂಖ್ಯಾತರ ಸಂಘಟನೆ' ಆಶ್ರಯದಲ್ಲಿ, ಬೆಳಗಾವಿಯಲ್ಲಿ 'ಕರ್ನಾಟಕ ಸ್ವಾಭಿಮಾನಿ ನಡಿಗೆ' ಕಾರ್ಯಕ್ರಮ ಜರುಗಿತು. ವಿವಿಧ ರಾಜ್ಯಗಳಿಂದ ಆಗಮಿಸಿದ್ದ, ನೂರಾರು ಪ್ರತಿನಿಧಿಗಳು ಭಾಗವಹಿಸಿದ್ದರು.

<><><>

ಕರ್ನಾಟಕ ರಾಜ್ಯ ಏಡ್ಸ್ ತಡೆ ಸೊಸಾಯಿಟಿ ಅಂಕಿ-ಅಂಶಗಳ ಪ್ರಕಾರ, ರಾಜ್ಯದಲ್ಲಿ ಒಟ್ಟು, 10 ಸಾವಿರದ 939 ಜನ ಲಿಂಗತ್ವ ಅಲ್ಪಸಂಖ್ಯಾತರು, ಸಮುದಾಯ ಆಧಾರಿತ ಸಂಘಟನೆಗಳಲ್ಲಿ, ಹೆಸರು ನೋಂದಾಯಿಸಿಕೊಂಡಿದ್ದಾರೆ. ಆ ಪೈಕಿ, 2 ಸಾವಿರದ ಇನ್ನೂರಾ 38 ಜನ 'ಮೈತ್ರಿ' ಯೋಜನೆ ಅಡಿ, 800 ರೂಪಾಯಿ ಮಾಸಾಶನ ಪಡೆಯುತ್ತಿದ್ದಾರೆ.

<><><>

ದಾವಣಗೆರೆ ಜಿಲ್ಲೆಯಲ್ಲಿ, ಲಿಂಗತ್ವ ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ, 'ಅಭಯ ಸ್ಪಂದನ' ಸಿ.ಬಿ.ಓ. ಸಂಸ್ಥೆಯಲ್ಲಿ, ಒಟ್ಟು ಸಾವಿರದ 3 ನೂರಾ 9 ಜನ ಹೆಸರು ನೊಂದಾಯಿಸಿಕೊಂಡಿದ್ದು, ಈ ಪೈಕಿ, ಇದೇ ಅಕ್ಟೋಬರ್ ಅಂತ್ಯದ ತನಕ, ಮೈತ್ರಿ ಯೋಜನೆಗೆ, 53 ಜನ ಮಾತ್ರ ಹೆಸರು ನೊಂದಾಯಿಸಿದ್ದಾರೆ.

<><><>

ಬೆಳಗಾವಿ ಲಿಂಗತ್ವ ಅಲ್ಪಸಂಖ್ಯಾತರ ಸಂಘಟನೆ ಅಧ್ಯಕ್ಷರಾದ, ಕಿರಣ ಬೇಡಿ, 'ಕರ್ನಾಟಕ ಸ್ವಾಭಿಮಾನಿ ನಡಿಗೆ' ಕುರಿತು, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

<><><>

ಕಿರಣ ಬೇಡಿ ಧ್ವನಿ 33 ಸೆಕೆಂದುಗಳು

<><><>

ಇಂದು ವಿಶ್ವ ಮೀನುಗಾರಿಕೆ ದಿನ. ಸುಸ್ಥಿರ ಮೀನುಗಾರಿಕೆ ನಿರ್ವಹಣೆಯ, ಪ್ರಾಮುಖ್ಯತೆಯನ್ನು ಎತ್ತಿ ಹಿಡಿಯಲು ಮತ್ತು, ಪ್ರಪಂಚದಾದ್ಯಂತ ಲಕ್ಷಾಂತರ ಜನರಿಗೆ, ಆಹಾರ ಭದ್ರತೆ ಮತ್ತು ಜೀವನೋಪಾಯವನ್ನು ಖಾತ್ರಿಪಡಿಸಲು, ಸಣ್ಣ ಪ್ರಮಾಣದ ಮೀನುಗಾರರ ನಿರ್ಣಾಯಕ ಪಾತ್ರದತ್ತ ಗಮನ ಸೆಳೆಯಲು, ಪ್ರತಿ ವರ್ಷ ಆಚರಿಸಲಾಗುತ್ತದೆ.

<><><>

ಮೀನುಗಾರಿಕೆ ಇಲಾಖೆ ವತಿಯಿಂದ, ಇಂದಿನಿಂದ 23ರ ವರೆಗೆ, ಉತ್ತರಕನ್ನಡ ಜಿಲ್ಲೆ, ಭಟ್ಕಳ ತಾಲೂಕಿನ ಮುರಡೇಶ್ವರದ, ಆರ್.ಎನ್.ಎಸ್. ಗಾಲ್ಫ್ ಕ್ಲಬ್ ರೆಸಾರ್ಟ್ನಲ್ಲಿ "ವಿಶ್ವ ಮೀನುಗಾರಿಕೆ ದಿನಾಚರಣೆ ಹಾಗೂ ಮತ್ಸ್ಯ ಮೇಳ ಆಯೋಜಿಸಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಇಂದು ಮಧ್ಯಾಹ್ನ 3 ಗಂಟೆಗೆ ಕಾರ್ಯಕ್ರಮ, ಉದ್ಘಾಟಿಸಲಿದ್ದಾರೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ವಿಧಾನ ಪರಿ ‘ತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ವಿಧಾನಸಭೆಯ ಸಭಾಧ್ಯಕ್ಷ ಯು.ಟಿ. ಖಾದರ್, ಮೀನುಗಾರಿಕೆ ಖಾತೆ ಸಚಿವ ಮಂಕಾಳ ವೈದ್ಯ ಭಾಗವಹಿಸಲಿದ್ದಾರೆ.

<><><>

ಧಾರವಾಡದ, ಸೃಷ್ಟಿ ರಸಿಕರ ರಂಗ ಪ್ರತಿಷ್ಠಾನದ ವತಿಯಿಂದ, ನಾದ ಗುರು ದೀಕ್ಷಾ ಕಾರ್ಯಕ್ರಮ, ಧಾರವಾಡದ ಸೃಜನಾ ರಂಗ ಮಂದಿರದಲ್ಲಿ, ಇಂದು ಸಂಜೆ 6 ಗಂಟೆಗೆ, ಜರುಗಲಿದೆ. ಮುಖ್ಯ ಅತಿಥಿಯಾಗಿ, ಪದ್ಮಶ್ರೀ ಪಂಡಿತ ಎಂ. ವೆಂಕಟೇಶ ಕುಮಾರ ಪಾಲ್ಗೊಳ್ಳಲಿದ್ದು, ಉಸ್ತಾದ ಶಫೀಕ ಖಾನ್ ಅವರಿಂದ, ಕುಮಾರಿ ಸೃಷ್ಟಿ ಸುರೇಶ ಅವರಿಗೆ ಗಂಡಾ ಬಂಧನ ನಡೆಯಲಿದೆ. ಬಳಿಕ ಸಿತಾರ ಹಾಗೂ ಗಾಯನದ ಸಂಗೀತ ಕಛೇರಿ ನಡೆಯಲಿದೆ.

<><><>

ಭಾರತದ ಪ್ರಜ್ವಲ್ ದೇವ್, ಕರಣ್ ಸಿಂಗ್, ಉಜ್ಬೇಕಿಸ್ತಾನದ ಖುಮೋಯುನ್ ಸುಲ್ತಾನೋವ್, ರಷ್ಯಾದ್ ಬಾಗ್ದಾನ್ ಬಾಬರೋವ್ ಅವರು, ಕಲಬುರಗಿಯಲ್ಲಿ ಆಯೋಜಿತ, ಪುರುಷರ ಐ.ಟಿ.ಎಫ್. ಟೆನಿಸ್ ಟೂರ್ನಿಯ ಸಿಂಗಲ್ಸ್ ಪ್ರಿಕ್ವಾರ್ಟರ್ ಫೈನಲ್ ಪ್ರವೇಶಿಸಿದರು. ಆದರೆ ಮೂರನೇ ಶ್ರೇಯಾಂಕದ ಇಗೋರ್ ಅಗಾಫೋನೊವ್ ಗಾಯಗೊಂಡು ಟೂರ್ನಿಯಿಂದ ಹೊರಗುಳಿದರು. ಮೊದಲ ಸುತ್ತಿನ ಪಂದ್ಯದಲ್ಲಿ ಕನ್ನಡಿಗ ಎಸ್.ಡಿ.ಪ್ರಜ್ವಲ್ ದೇವ್ ಅವರು 6–2, 6–3 ರಿಂದ ಜಪಾನಿನ ಕಜುಕಿ ನಿಶಿವಾಕಿ ಅವರನ್ನು ಪರಾಭವಗೊಳಿಸಿದರು. ನಾಲ್ಕನೇ ಶ್ರೇಯಾಂಕದ ಕರಣ್ ಸಿಂಗ್ 7–6, 6–0 ಯಿಂದ ಆದಿತ್ಯ ಬಾಲಶೇಖರ್ ವಿರುದ್ಧ ಸುಲಭ ಜಯ ಗಳಿಸಿದರು.

<><><>

ಈಗ ಸಂಕ್ಷಿಪ್ತ ಸುದ್ದಿಗಳು:

<><><>

ವಿಧಾನ ಮಂಡಲ ಚಳಿಗಾಲದ ಅಧಿವೇಶನ, ಡಿಸೆಂಬರ್ 9 ರಿಂದ ಬೆಳಗಾವಿಯ ಸುವರ್ಣ ಸೌಧದಲ್ಲಿ ನಡೆಯಲಿದ್ದು, ಜಿಲ್ಲಾಧಿಕಾರಿ ಮೊಹಮ್ಮದ್ ರೋ ’ನ್, ಪೂರ್ವ ಸಿದ್ಧತಾ ಸಭೆ ನಡೆಸಿದರು.

<><><>

ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘ, ಹತ್ತು ದಿನಗಳ ನಾಟಕೋತ್ಸವ ಆಯೋಜಿಸಿದೆ. ಬೆಂಗಳೂರಿನ ಪಯಣ ತಂಡದ, ತಲ್ಕಿ ನಾಟಕಕ್ಕೆ, ಗಾಯತ್ರಿ ಮಹಾದೇವ ಚಾಲನೆ ನೀಡಿದರು.

<><><>

ಚಿಕ್ಕಮಗಳೂರು ಜಿಲ್ಲೆ, ಪಶ್ಚಿಮಘಟ್ಟ ಅರಣ್ಯದ ಕುದುರೆಮುಖ, ಕೊಪ್ಪ, ಶೃಂಗೇರಿ ಭಾಗದಲ್ಲಿ ಎ.ಎನ್.ಎಫ್ ಪಡೆ, ನಕ್ಸಲರ ವಿರುದ್ಧದ ಕೊಂಬಿಂಗ್ ಕಾರ್ಯಾಚರಣೆ ಮುಂದುವರೆಸಿದೆ.

<><><>

ಸಂತ ಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ, 'ಶ್ರಮಣ ಧಾರೆಗಳ ಸಂಸ್ಕೃತಿ ಉತ್ಸವ'ವನ್ನು, ಮಂಡ್ಯದ ಕರ್ನಾಟಕ ಸಂಘ ನಾಳೆ ಮತ್ತು ನಾಡಿದ್ದು, ಕೆ.ವಿ. ಶಂಕರಗೌಡ ರೈತ ಸಭಾಂಗಣದಲ್ಲಿ ಆಯೋಜಿಸಿದೆ.

<><><>

ರಾಜ್ಯ ಚುನಾವಣಾ ಆಯೋಗ, ನಗರ ಸ್ಥಳೀಯ ಸಂಸ್ಥೆಗಳಿಗೆ, ನಾಡಿದ್ದು 23 ರಂದು, ಉಪ ಚುನಾವಣೆ ನಡೆಸಲು ಆದೇಶಿಸಿದೆ. ಶನಿವಾರ ಮತದಾನ ನಡೆಯಲಿದೆ.

<><><>

ದೊಡ್ಡಬಳ್ಳಾಪುರದಲ್ಲಿ 'ನಲ್ ಜಲ್ ಮಿತ್ರ ತರಬೇತಿ ಕಾರ್ಯಕ್ರಮ'ಕ್ಕೆ, ಜಿಲ್ಲಾ ಪಂಚಾಯ್ತಿ ಸಿ.ಇ.ಓ. ಕೆ.ಎನ್.ಅನುರಾಧಾ ಚಾಲನೆ ನೀಡಿದರು.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- **ಹಿರಿಯ ಸಾಹಿತಿ, ಗೊ.ರು.ಚನ್ನಬಸಪ್ಪ, ಮಂಡ್ಯದ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ, ಸರ್ವಾಧ್ಯಕ್ಷರಾಗಿ ಆಯ್ಕೆ.**
- **ಕೈಗಾರಿಕಾ ಕ್ಷೇತ್ರದ ಬಂಡವಾಳ ಹೂಡಿಕೆಯಲ್ಲಿ ರಾಜ್ಯ, ದೇಶಕ್ಕೆ ಮೂರನೇ ಸ್ಥಾನದಲ್ಲಿದೆ – ಮುಖ್ಯಮಂತ್ರಿ ಸಿದ್ದರಾಮಯ್ಯ.**
- **ದೇಶದ ಆರ್ಥಿಕ ವ್ಯವಸ್ಥೆಯನ್ನು ಸುದೃಢಗೊಳಿಸಲು, ಸಹಕಾರಿ ರಂಗ ಸಮರ್ಥವಾಗಿದೆ – ಸತೀಶ ಜಾರಕಿಹೊಳಿ.**
- **ಇಂದು, ವಿಶ್ವ ಮೀನುಗಾರಿಕೆ ದಿನಾಚರಣೆ; ಸಣ್ಣ ಪ್ರಮಾಣದ ಮೀನುಗಾರರ ನಿರ್ಣಾಯಕ ಪಾತ್ರದತ್ತ, ಗಮನ ಸೆಳೆಯುವ, ದಿನ.**

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 7 ಗಂಟೆ 35 ನಿಮಿಷಕ್ಕೆ.**

<><><>